OCTOBER 16,2024

ALL INDIA RADIO- DHARWAD

PRADESH SAMACHARA (KANNADA) 7:05 AM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವರು–ಶ್ರೀಧರ ಹೆಗಡೆ ಭದ್ರನ್

<><><>

ಮುಖ್ಯಾಂಶಗಳು

<><><>

- ಮಾದಕವಸ್ತುಗಳ ನಿಯಂತ್ರಣಕ್ಕೆ ಕಾನೂನುಗಳಲ್ಲಿ ಸೂಕ್ತ ತಿದ್ದುಪಡಿಗಳನ್ನು ತರಲು ಚಿಂತನೆ –ಮುಖ್ಯಮಂತ್ರಿ ಸಿದ್ದರಾಮಯ್ಯ.
- ಜಾತಿ ಪ್ರಮಾಣಪತ್ರ ಕುರಿತ ಗೊಂದಲ ನಿವಾರಣೆಗೆ ಸೂಕ್ತ ಕ್ರಮ– ಮುಖ್ಯಮಂತ್ರಿ
- ಸರ್ಕಾರಿ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿ ಸಂಬಂಧ ಚರ್ಚೆ ನಡೆಸಲಾಗುವುದು ಸಚಿವ ಮಧು ಬಂಗಾರಪ್ಪ.
- ರಾಜ್ಯದ ಮೂರು ವಿಧಾನಸಭಾ ಕ್ಷೇತ್ರಗಳಿಗೆ ನವೆಂಬರ್ 13ರಂದು ಉಪಚುನಾವಣೆ ; 23 ರಂದು ಫಲಿತಾಂಶ ಪ್ರಕಟ
- ರಾಜ್ಯದ ಹಲವು ಜಿಲ್ಲೆಗಳಲ್ಲಿ ಭಾರೀ ಮಳೆಯ ಮುನ್ಸೂಚನೆ; ಬೆಂಗಳೂರಿನಲ್ಲಿ ಶಾಲೆಗಳಿಗೆ ರಜೆ ಘೋಷಣೆ.

ಮಾದಕವಸ್ತುಗಳ ನಿಯಂತ್ರಣಕ್ಕೆ ಕಾನೂನುಗಳಲ್ಲಿ ಸೂಕ್ತ ತಿದ್ದುಪಡಿಗಳನ್ನು ತರಲು ಸರ್ಕಾರ ಯೋಚಿಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಿದ್ದ ತಂಬಾಕು ಮುಕ್ತ ಯುವ ಅಭಿಯಾನ ಬೃಹತ್ ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಯುವಜನತೆಯಲ್ಲಿ ತಂಬಾಕು ಸೇವನೆಯಿಂದ ಆಗಬಹುದಾದ ದು ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು ತಂಬಾಕು ಮುಕ್ತ ಯುವ ಅಭಿಯಾನ 2.0 ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದರು. ತಂಬಾಕು ಬಳಕೆಯನ್ನು ಮಾಡುವುದಿಲ್ಲ, ಮಾಡಲೂ ಬಿಡುವುದಿಲ್ಲ ಎಂದು ವಿದ್ಯಾರ್ಥಿಗಳು ಇಂದು ಪ್ರತಿಜ್ಞೆ ಕೈಗೊಂಡಿದ್ದಾರೆ. ಈ ಪ್ರತಿಜ್ಞೆಯನ್ನು ಅಕ್ಷರಶ: ಪಾಲಿಸಬೇಕು ಎಂದರು. ಯುವಜನತೆ ಈ ದುಶ್ಚಟಕ್ಕೆ ಬಲಿಯಾಗದಂತೆ, ಮಾದಕ ವಸ್ತುಗಳ ದಂಧೆಯನ್ನು ನಿಗ್ರಹಿಸುವುದೇ ಸರ್ಕಾರದ ಗುರಿಯಾಗಿದೆ. ವಿಶ್ವ ಆರೋಗ್ಯ ಸಂಸ್ಥೆ ವರದಿಯಂತೆ ಭಾರತದಲ್ಲಿ ಪ್ರತಿ ವ ್ಷ 13.5 ಲಕ್ಷ ಜನರು ತಂಬಾಕು ಸೇವನೆಯಿಂದ ಸಾವಿಗೀಡಾಗುತ್ತಿದ್ದಾರೆ ಎಂಬುದು ಆತಂಕಕಾರಿ ಎಂದರು.

<><><>

ಜಾತಿ ಪ್ರಮಾಣ ಪತ್ರದ ಬಗ್ಗೆ ಇರುವ ಗೊಂದಲ ನಿವಾರಿಸಿ ಸೂಕ್ತ ಸುತ್ತೋಲೆ ಹೊರಡಿಸುವಂತೆ ಸಮಾಜ ಕಲ್ಯಾಣ ಹಾಗೂ ಕಾನೂನು ಇಲಾಖೆಯ ಕಾರ್ಯದರ್ಶಿಗಳಿಗೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ಪರಿಶಿ ್ಟ ಪಂಗಡದ ಸಮುದಾಯಗಳ ಸಭೆಯಲ್ಲಿ ಮಾತನಾಡಿದ ಅವರು; ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಆಗಿರುವ ಅವ್ಯವಹಾರದ ಹಿನ್ನಲೆಯಲ್ಲಿ ಅಭಿವೃದ್ಧಿ  ನಿಗಮಕ್ಕೆ ಅನುದಾನಕ್ಕೆ ಕೊರತೆಯಾಗಬಾರದು ಎಂದು ನಿರ್ದೇಶಿಸಲಾಗಿದೆ.  ಕೆಲವರು ಸುಳ್ಳು ಜಾತಿ ಪತ್ರಗಳನ್ನು ಪಡೆಯುತ್ತಿರುವುದು ಬೆಳಕಿಗೆ ಬಂದಿದೆ ಎಂದರು. ರಾಜ್ಯದಲ್ಲಿ ನಡೆಯುವ ವಿಧಾನಸಭೆ ಉಪಚುನಾವಣೆಯನ್ನು ಎದುರಿಸಲು  ಕಾಂಗ್ರೆಸ್ ಪಕ್ಷ ಸಿದ್ಧವಾಗಿದೆ. ಈ ನಿಟ್ಟಿನಲ್ಲಿ ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಅವರು ತಿಳಿಸಿದರು.

<><><>

ಬೆಂಗಳೂರು ನಗರದ 110 ಗ್ರಾಮಗಳಿಗೆ ಕುಡಿಯುವ ನೀರನ್ನು ಒದಗಿಸುವ 4 ಸಾವಿರದ 336 ಕೋಟಿ ವೆಚ್ಚದ ಕಾವೇರಿ ಐದನೆಯ ಹಂತದ ನೀರುಸರಬರಾಜು ಯೋಜನೆ ಇಂದು ಉದ್ಘಾಟನೆಯಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಸುಮಾರು 50 ಲಕ್ಷ ಜನರಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸುವ ಮಹತ್ವಾಕಾಂಕ್ಷೆಯೊಂದಿಗೆ ಆರಂಭಿಸಲಾದ ಈ ಯೋಜನೆಯು ನಮ್ಮ ಸರ್ಕಾರದ ಬದ್ಧತೆ ಮತ್ತು ಕಾರ್ಯದಕ್ಷತೆಯಿಂದಾಗಿ ಅತ್ಯಂತ ಯಶಸ್ವಿಯಾಗಿ ಅನು  ್ಠನಗೊಂಡಿದೆ ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಹೇಳಿದ್ದಾರೆ.

<><><>

ಸರ್ಕಾರಿ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ಕೊರತೆ ಇದ್ದು,  ನೇಮಕಾತಿ ಮಾಡಿಕೊಳ್ಳುವ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಚರ್ಚೆ ನಡೆಸಲಾಗುವುದು ಎಂದು ಶಿಕ್ಷಣ ಖಾತೆ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ. ಧಾರವಾಡದಲ್ಲಿ ಮಾತನಾಡಿದ ಅವರು, ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ, ಯುಕೆಜಿ ಆರಂಭಿಸಲಾಗುತ್ತಿದೆ.ಕಲ್ಯಾಣ ಕರ್ನಾಟಕ ಭಾಗದಲ್ಲಿ ಈಗಾಗಲೇ 1008 ಎಲ್ ಕೆಜಿ, ಯುಕೆಜಿ ಶಾಲೆ ಆರಂಭಿಸಲಾಗಿದೆ.ಅಲ್ಲಿ ಒಂದೇ ತಿಂಗಳಲ್ಲಿ 42 ಸಾವಿರ ಮಕ್ಕಳು ಪ್ರವೇಶ ಪಡೆದಿವೆ. ಇಡೀ ರಾಜ್ಯದಲ್ಲೂ ಎಲ್‌ಕೆಜಿ, ಯುಕೆಜಿ ಆರಂಭಿಸಲಾಗುವುದು. ದ್ವಿಭಾ  ೆಯಲ್ಲಿ ಈ ತರಗತಿಗಳನ್ನು ಆರಂಭಿಸಲಾಗುವುದು ಎಂದರು. ತಾವು ಸಚಿವರಾದ ಮೇಲೆ 13 ಸಾವಿರ ಶಿಕ್ಷಕರ ನೇಮಕಾತಿ ಆಗಿದೆ. ಅನುದಾನಿತ ಶಾಲೆಯಲ್ಲಿ 6 ಸಾವಿರ ಶಿಕ್ಷಕರ ನೇಮಕಾತಿ ಆಗಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ 5800 ಶಿಕ್ಷಕರ ನೇಮಕಾತಿ ಮಾಡಿಕೊಳ್ಳಲು ಸಚಿವ ಸಂಪುಟದ ಅನುಮತಿ ಸಿಕ್ಕಿದೆ ಎಂದರು.

<><><>

ಕಾರ್ಮಿಕರ ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರ ಜಾರಿಗೆ ತಂದಿರುವ ಕಾರ್ಯಕ್ರಮಗಳನ್ನು ಅರ್ಹ ಫಲಾನುಭವಿಗಳು ಸದುಪಯೋಗಪಡಿಸಿಕೊಳ್ಳಬೇಕೆಂದು ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಎಸ್.ಮಲ್ಲಿಕಾರ್ಜುನ ಹೇಳಿದ್ದಾರೆ. ಕಾರ್ಮಿಕ ಇಲಾಖೆಯಿಂದ  2024-25 ನೇ ಸಾಲಿನಲ್ಲಿ 2300  ಕಟ್ಟಡ ನಿರ್ಮಾಣ ಹಾಗೂ ವೆಲ್ಡಿಂಗ್ ಕಾರ್ಮಿಕರುಗಳಿಗೆ ಕಿಟ್‌ಗಳ ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

<><><>

ಈಗ ಪ್ರಕಟಣೆ, ನಂತರ ಪ್ರದೇಶ ಸಮಾಚಾರ ಮುಂದುವರಿಯುವದು

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ರಾಜ್ಯದ ಚನ್ನಪಟ್ಟಣ, ಶಿಗ್ಗಾವಿ ಹಾಗೂ ಸಂಡೂರು ವಿಧಾನಸಭಾಕ್ಷೇತ್ರಗಳ ಉಪಚುನಾವಣೆಗೆ ಕೇಂದ್ರ ಚುನಾವಣಾ ಆಯೋಗ ದಿನಾಂಕ ಘೋಷಿಸಿದ್ದು, ನವೆಂಬರ್ 13ರಂದು ಈ ಮೂರು ವಿಧಾನಸಭಾ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಅಕ್ಟೋಬರ್ 18ರಂದು ಚುನಾವಣೆಗೆ ಅಧಿಸೂಚನೆ ಹೊರಬೀಳಲಿದ್ದು, ಅಂದಿನಿಂದಲೇ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಲಿದೆ ಎಂದು ಕೇಂದ್ರ ಚುನಾವಣಾ ಮುಖ್ಯ ಆಯುಕ್ತ ರಾಜೀವ ಕುಮಾರ ದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಪ್ರಕಟಿಸಿದ್ದಾರೆ. ಅಕ್ಟೋಬರ್ 25ರಂದು ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದ್ದು, ಅಕ್ಟೋಬರ್ 28ರಂದು ನಾಮಪತ್ರಗಳ ಪರಿಶೀಲನೆ ನಡೆಸಲಾಗುವುದು. ಅಕ್ಟೋಬರ್ 30ರಂದು ಉಮೇದುವಾರರು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ. ನವೆಂಬರ್ 23ರಂದು ಮತಗಳ ಎಣಿಕೆ ನಡೆಯಲಿದ್ದು, ಅಂದೇ ಫಲಿತಾಂಶ ಪ್ರಕಟವಾಗಲಿದೆ.

<><><>

ಉಡುಪಿ, ದಕ್ಷಿಣಕನ್ನಡ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಹಾಸನ, ಕೋಲಾರ, ಮಂಡ್ಯ, ರಾಮನಗರ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದ್ದು, ಭಾರತೀಯ ಹವಾಮಾನ ಇಲಾಖೆಯಿಂದ ಆರೆಂಜ್ ಅಲರ್ಟ್ ನೀಡಲಾಗಿದೆ ಎಂದು ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ತಿಳಿಸಿದೆ. ಉತ್ತರ ಒಳನಾಡು ಜಿಲ್ಲೆಗಳಲ್ಲಿ ಚದುರಿದಿಂದ ವ್ಯಾಪಕವಾಗಿ ಸಾಧಾರಣ ಮಳೆ ಹಾಗೂ ಅಲ್ಲಲ್ಲಿ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಮಾಹಿತಿ ನೀಡಿದೆ.

<><><>

ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ರಾಜ್ಯದ ಕರಾವಳಿ ತೀರದಲ್ಲಿ ಮುಂದಿನ ಐದು ದಿನಗಳ ಕಾಲ ಸಮುದ್ರದಲ್ಲಿ ವಾಯುಭಾರ ಕುಸಿತದಿಂದಾಗಿ ಹೆಚ್ಚಿನ ಗಾಳಿಯೊಂದಿಗೆ ಮಳೆಯಾಗುವ ಸಾಧ್ಯತೆಯಿದ್ದು, ಪ್ರವಾಸಿಗರು, ಸಾರ್ವಜನಿಕರು ನದಿ, ಜಲಪಾತ, ನೀರಿರುವ ಪ್ರದೇಶಕ್ಕೆ ತೆರಳಬಾರದು ಹಾಗೂ ಮೀನುಗಾರರು ಆಳ ಸಮುದ್ರದಲ್ಲಿ ಮೀನುಗಾರಿಕೆ ಮಾಡಬಾರದೆಂದು ಉಡುಪಿ ಜಿಲ್ಲಾಧಿಕಾರಿ ಡಾಕ್ಟರ್ ಕೆ. ವಿದ್ಯಾಕುಮಾರಿ ನಿರ್ದೇಶನ ನೀಡಿದ್ದಾರೆ.

ಬೆಂಗಳೂರು ನಗರ ಜಿಲ್ಲೆಯಾದ್ಯಂತ ನಿರಂತರವಾಗಿ ಮಳೆಯಾಗುತ್ತಿದ್ದು, ಹವಾಮಾನ ಇಲಾಖೆಯು ಇಂದು ಮತ್ತು ನಾಳೆ ಆರೆಂಜ್ ಅಲರ್ಟ್ ಘೋಷಿಸಿದೆ. ಈ ಮುನ್ಸೂಚನೆಯಂತೆ ಮಳೆಯ ತೀವ್ರತೆ ಹೆಚ್ಚಾಗಿರುವುದರಿಂದ ಮುಂಜಾಗೃತಾ ಕ್ರಮವಾಗಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಇಂದು ಬೆಂಗಳೂರು ನಗರ ಜಿಲ್ಲೆಯ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಹಾಗೂ ಖಾಸಗಿ/ ಅನುದಾನಿತ ಪ್ರಾಥಮಿಕ, ಪ್ರೌಢಶಾಲೆಗಳಿಗೆ ರಜೆ ಘೋಷಿಸಿ ಜಿಲ್ಲಾಡಳಿತ ಆದೇಶಿಸಿದೆ.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಎಡೆಬಿಡದೆ ಸುರಿಯುತ್ತಿರುವ ಮಳೆಯಿಂದಾಗಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಮುಂಜಾಗ್ರತಾ ಕ್ರಮವಾಗಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಎಲ್ಲ ಅಂಗನವಾಡಿ ಕೇಂದ್ರಗಳಿಗೆ ಜಿಲ್ಲಾಧಿಕಾರಿ ಡಾಕ್ಟರ್ ಎನ್.ಶಿವಶಂಕರ ರಜೆ ಘೋಷಿಸಿದ್ದಾರೆ.

<><><>

ಬೆಂಗಳೂರಿನಲ್ಲಿ ಸುರಿದ ಭಾರಿ ಮಳೆಯ ಹಿನ್ನೆಲೆಯಲ್ಲಿ ಬಿಬಿಎಂಪಿ–ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನಿಯಂತ್ರಣ ಕೊಠಡಿಗೆ ಉಪ ಮುಖ್ಯಮಂತ್ರಿ ಭೇಟಿ ನೀಡಿ ಮಳೆಯಿಂದ ಹಾನಿಗೊಳಗಾದ ಪ್ರದೇಶಗಳ ಬಗ್ಗೆ ಮಾಹಿತಿ ಪಡೆದು, ಪರಿಸ್ಥಿತಿ ಅವಲೋಕಿಸಿದರು. ಮುಂದಿನ ಎರಡು ದಿನಗಳ ಕಾಲ ಮಳೆಯಾಗುವ ಸಾಧ್ಯತೆಯಿರುವುದರಿಂದ ಬಿಬಿಎಂಪಿ ನಿಯಂತ್ರಣ ಕೊಠಡಿ ಹಾಗೂ ಅಧಿಕಾರಿಗಳು ದಿನದ 24 ಗಂಟೆಗಳ ಕಾಲ ಕಾರ್ಯೋನ್ಮುಖರಾಗಿರಬೇಕು ಎಂದರು. ಬಿಬಿಎಂಪಿ ವ್ಯಾಪ್ತಿಯಲ್ಲಿ ಮಳೆಯಿಂದ ತೊಂದರೆ ಎದುರಾದರೆ 1533 ಸಹಾಯವಾಣಿಗೆ ಕರೆ ಮಾಡಬಹುದು.

<><><>

ಈ ವರ್ಷ ಚೆನ್ನಾಗಿ ಮಳೆಯಾಗಿರುವುದರಿಂದ ನವಿಲತೀರ್ಥ ಇಂದಿರಾಗಾಂಧಿ ಜಲಾಶಯ ಪೂರ್ಣಪ್ರಮಾಣದಲ್ಲಿ ಭರ್ತಿಯಾಗಿದೆ. 2 ಸಾವಿರದ 79 ಅಡಿ ಆಳವಿರುವ ಜಲಾಶಯದಲ್ಲಿ 37.7.ಟಿಎಂಸಿ ನೀರಿನ ಸಂಗ್ರಹವಾಗಿದೆ. ಇದರಿಂದ ಈ ವರ್ಷ ಈ ಭಾಗದ ರೈತರ ಕೃಷಿ ಚಟುವಟಿಕೆಗಳು ಹಾಗೂ ಕುಡಿಯುವ ನೀರಿಗೆ ಯಾವುದೇ ರೀತಿ ನೀರಿನ ಕೊರತೆಯಾಗುವುದಿಲ್ಲ ಎಂದು ಮಹಿಳಾ ಹಾಗೂ ಮಕ್ಕಳ ಕಲ್ಯಾಣ ಖಾತೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಹೇಳಿದ್ದಾರೆ. ಮಲಪ್ರಭಾ ನೀರಾವರಿ ಸಲಹಾ ಸಮಿತಿಯ ಅಧ್ಯಕ್ಷರೂ ಆಗಿರುವ ಅವರು; ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ನವಿಲುತೀರ್ಥ ಇಂದಿರಾಗಾಂಧಿ ಜಲಾಶಯದಲ್ಲಿ ಮಲಪ್ರಭಾ ನದಿಗೆ ಗಂಗಾಪೂಜೆಯ ಮೂಲಕ ಬಾಗಿನ ಅರ್ಪಣೆ ಮಾಡಿ ಮಾತನಾಡಿದರು.

<><><>

ಸಂಕ್ಷಿಪ್ತ ಸುದ್ದಿ

<><><>

ಇಂದು ವಿಶ್ವ ಆಹಾರ ದಿನ. ಪ್ರತಿ ವರ್ಷ ಆಕ್ಟೋಬರ್ 16 ರಂದು ವಿಶ್ವ ಆಹಾರ ದಿನವನ್ನಾಗಿ ಆಚರಿಸಲಾಗುತ್ತದೆ. 'ಉತ್ತಮ ಜೀವನ ಮತ್ತು ಉತ್ತಮ ಭವಿಷ್ಯಕ್ಕಾಗಿ ಆಹಾರದ ಹಕ್ಕು' ಎಂಬುದು ಈ ವರ್ಷದ ಘೋಷವಾಕ್ಯವಾಗಿದೆ.

<><><>

ಜೀವನದಿ ಕಾವೇರಿಯ ಪುಣ್ಯ ಭೂಮಿ ತಲಕಾವೇರಿ ಕ್ಷೇತ್ರದಲ್ಲಿ ನಾಳೆ ಬೆಳಗ್ಗೆ 7 ಗಂಟೆ 40 ನಿಮಿಷಕ್ಕೆ ನಡೆಯುವ ತೀರ್ಥೋದ್ಭವಕ್ಕೆ ಬ್ರಹ್ಮಗಿರಿ ತಪ್ಪಲಿನ ಪುಣ್ಯ ಕ್ಷೇತ್ರ ಸಕಲ ಸೌಲಭ್ಯಗಳಿಂದ ಸಿದ್ಧಗೊಂಡಿದೆ.

<><><>

ಸಾರ್ವಜನಿಕರಿಗೆ ಲಿಂಗಾನುಪಾತ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಗದಗ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ರಾಧಾ ಮಣ್ಣೂರು ತಿಳಿಸಿದ್ದಾರೆ.

<><><>

ಮಕ್ಕಳು ಮತ್ತು ದೊಡ್ಡವರಲ್ಲಿ ವಿವಿಧ ರೀತಿಯ ಕಣ್ಣಿನ ದೋಷಗಳನ್ನು ಸರಿಪಡಿಸುವ ಅಂಧತ್ವ ಮುಕ್ತ ಶಿವಮೊಗ್ಗ 2024 ಒಂದು ಅತ್ಯುತ್ತಮ ಕಾರ್ಯಕ್ರಮವಾಗಿದ್ದು, ಈ ಕಾರ್ಯಕ್ರಮದ ಪರಿಣಾಮಕಾರಿ ಅನುಷ್ಠಾನಕ್ಕೆ ಅಗತ್ಯವಾದ ಎಲ್ಲ ಪೂರ್ವಸಿದ್ಧತೆ ಹಾಗೂ ಕ್ರಿಯಾಯೋಜನೆಯನ್ನು ರೂಪಿಸುವಂತೆ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ತಿಳಿಸಿದ್ದಾರೆ.

<><><> <><><>